# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿಬಿಎಂಪಿ/ಯವ/ಕೊಉ/ಪಿಆರ್/ /2020-21

ಸಹಾಯಕ ಅಭಿಯಂತರರ ಕಛೇರಿ
ಕೊಡಿಗೇಹಳ್ಳಿ ಉಪವಿಭಾಗ, ಯಲಹಂಕ ವಲಯ
9ನೇ ಅಡ್ಡರಸ್ತೆ, ಡಿ ಬ್ಲಾಕ್
ಸಹಕಾರನಗರ, ಬೆಂಗಳೂರು 560092
ದಿನಾಂಕ: 19/12/2020

**ದಿನಾಂಕ: 19-12-2020 ರಂದು ವಾರ್ಡ್ ಸಮಿತಿಯ ಸಭೆಯ ನಡವಳಿಗಳು:-**

**ಸಭೆಗೆ ಹಾಜರಿದ್ದವರು:**

- ಶ್ರೀ ಗುರು, ಕಾರ್ಯಪಾಲಕ ಅಭಿಯಂತರರು, ನೋಡೆಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ವಾರ್ಡ್ ಸಮಿತಿ.
- ಶ್ರೀ ಪ್ರವೀಣ್ ಎ.ಆರ್., ಕಿರಿಯ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ
- ಶ್ರೀ. ಶ್ರೀನಿವಾಸ್ ಶಿರೂರು, ಪೊಲೀಸ್ ಸಬ್‌ಇನ್ಸ್‌ಪೆಕ್ಟರ್, ಕೊಡಿಗೇಹಳ್ಳಿ ಠಾಣೆ, ಕೊಡಿಗೇಹಳ್ಳಿ
- ಶ್ರೀಮತಿ. ಚಿಂತನ, ಸಹಾಯಕ ಅಭಿಯಂತರರು (ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ) (**BWSSB**)
- ಶ್ರೀಮತಿ. ಕವಿತಾ, ಕಿರಿಯ ಆರೋಗ್ಯ ಪರಿವೀಕ್ಷಕರು, ಘನ ತ್ಯಾಜ್ಯ
- ಶ್ರೀ. ಮಂಜುನಾಥ್, ಹಿರಿಯ ಆರೋಗ್ಯ ಪರಿವೀಕ್ಷಕರು, ಅರೋಗ್ಯ
- ಶ್ರೀ. ಗೋವಿಂದರಾಜು, ಅಭಿಯಂತರರು, (BESCOM)

**ವಾರ್ಡ್ ಸಮಿತಿ ಸದಸ್ಯರು**

- ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು
- ಶ್ರೀ ಶ್ರೀಕಾಂತ್, ಆಮ್ಕೋ ಬಡಾವಣೆ, ಸದಸ್ಯರು
- ಶ್ರೀ ಆರ್.ಆರ್. ಪಟ್ನನಾಯಕ್, ಎಲ್.ಕೆ.ಆರ್ ಬಡಾವಣೆ, ಸದಸ್ಯರು
- ಶ್ರೀ ವೀರಣ್ಣ, ಎಲ್.ಕೆ.ಆರ್ ಬಡಾವಣೆ, ಸದಸ್ಯರು
- ಶ್ರೀಮತಿ ನಿರ್ಮಲರಾವ್, ಸಹಕಾರನಗರ, ಸದಸ್ಯರು
- ಶ್ರೀಮತಿ ಪ್ರತ್ಯುಷ, ಸಹಕಾರನಗರ, ಸದಸ್ಯರು
- ಶ್ರೀ ಮಹೇಶ್ ಜೆ, ಸಹಕಾರನಗರ, ಸದಸ್ಯರು
- ಶ್ರೀಮತಿ ಗೀತಾಬಾಯಿ. ಬಾಲಾಜಿ ಬಡಾವಣೆ, ಸದಸ್ಯರು

ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಮಿತಿ ಕಾಯದರ್ಶಿಗಳಾದ ಶ್ರೀ. ಪ್ರವೀಣ್ ಎ.ಆರ್. ರವರು ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ ವಾರ್ಡ್ ಸಮಿತಿಯ ಸದಸ್ಯರುಗಳು ಎಲ್ಲಾ ವೃಂದದ ಅಧಿಕಾರಿಗಳನ್ನು ಸ್ವಾಗತಿಸುತ್ತಾ, ಸಭೆಯನ್ನು ಪ್ರಾರಂಭಿಸಲಾಯಿತು ಹಾಗೂ ಈ ಹಿಂದಿನ ಸಭೆಯಲ್ಲಿ ಚರ್ಚಿಸಿದ ಸಮಸ್ಯೆಗಳನ್ನು ಪರಿಹರಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ಶ್ರೀ ಗುರು, ಕಾ.ಪಾ.ಅ ಹಾಗೂ ನೋಡಲ್ ಅಧಿಕಾರಿ ರವರು ಮಾತನಾಡುತ್ತ, ಹಿಂದಿನ ಸಭೆಯಲ್ಲಿ ಚರ್ಚಿಸಲಾದ ಸಮಸ್ಯೆಗಳ ಬಗ್ಗೆ ವಿಚಾರಿಸಿದರು ಹಾಗೂ ಬಡಾವಣೆಯಲ್ಲಿ ಎಲ್ಇಡಿ ಬಲ್ಬ್‌ಗಳ ಸಮಸ್ಯೆಗಳ ಬಗ್ಗೆ, ಸಾರ್ವಜನಿಕರು ರಾತ್ರಿವೇಳೆ ಸಂಚಾರಿಸುವ ಸಂದರ್ಭದಲ್ಲಿ ತೊಂದರೆಯುಂಟಾಗುತ್ತಿರುವ ಬಗ್ಗೆ, ಹಾಗೂ ಸದರಿ ಬಡಾವಣೆಯಲ್ಲಿ ಘನತ್ಯಾಜ್ಯದ ಸಮಸ್ಯೆಗಳ ಬಗ್ಗೆ ವಿಚಾರಣೆಯನ್ನು ಮಾಡಿದರು.

ಶ್ರೀಮತಿ. ಕವಿತ ಕಿ.ಆ.ನಿ ರವರು ತ್ಯಾಜ್ಯ ವಿಂಗಡಣೆ ಮಾಡುತ್ತಿದ್ದು, ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ಮತ್ತು ಬ್ಲಾಕ್ ಸ್ಪಾಟ್‌ಗಳಲ್ಲಿ ಕಸ ಎಸೆಯುತ್ತಿದ್ದಾರೆಂದು ಸಭೆಗೆ ತಿಳಿಸಿದರು. ಆಗ ನೋಡೆಲ್ ಅಧಿಕಾರಿ ರವರು ಕಸ ಎಸೆಯುವವರ ವಿರುದ್ಧ ದಂಡ ವಿಧಿಸಲು ಹಾಗೂ ಸೂಕ್ತ ಕ್ರಮಕೈಗೊಳ್ಳಬೇಕೆಂದು ಸಭೆಗೆ ತಿಳಿಸಿದರು.

ಶ್ರೀನಿವಾಸ್ ಶಿರೂರು, ಪೊಲೀಸ್ ಸಬ್‌ಇನ್ಸ್‌ಪೆಕ್ಟರ್, ಕೊಡಿಗೇಹಳ್ಳಿ ಠಾಣೆ ರವರು ವಾರ್ಡ್ ಸಂಖ್ಯೆ:08 ರಲ್ಲಿ ಸಿಸಿ ಕ್ಯಾಮರಾಗಳನ್ನು ಅಳವಡಿಸಿರುತ್ತಾರೆ. ಕೆಲವು ಸಿಸಿ ಕ್ಯಾಮರಾಗಳು ದುರಸ್ಥಿಯಲ್ಲಿದ್ದು, ಅವುಗಳನ್ನು ಸರಿಪಡಿಸಿ ಕೊಡಲು ಕೋರಿರುತ್ತಾರೆ.

ಶ್ರೀ ಪ್ರವೀಣ್ ಎ.ಆರ್., ಕಿರಿಯ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ ರವರು ಸಿಸಿ ಕ್ಯಾಮರಾಗಳ ದುರಸ್ಥಿ ಪ್ರಸ್ತಾವನೆಯನ್ನು ತೆಗೆದುಕೊಳ್ಳುವುದಾಗಿ ಹೇಳಿದರು.

ಶ್ರೀ ವೀರಣ್ಣ, ಎಲ್.ಕೆ.ಆರ್ ಬಡಾವಣೆ, ಸದಸ್ಯರು ರವರು ಸದರಿ ಬಡಾವಣೆಯಲ್ಲಿ ಅನುಮತಿಯನ್ನು ಪಡೆಯದೇ ಕಾರಿನ ಗ್ಯಾರೇಜ್ ಅನ್ನು ತೆರೆದಿರುತ್ತಾರೆ ಹಾಗೂ ಮುಖ್ಯರಸ್ತೆಯಲ್ಲಿ ಅವರ ವಾಹನವನ್ನು ಪಾರ್ಕಿಂಗ್ ಮಾಡಿರುತ್ತಾರೆ ಮತ್ತು ಸಾರ್ವಜನಿಕರಿಗೆ ಸಂಚಾರವನ್ನು ಮಾಡಲು ತುಂಬಾ ತೊಂದರೆ ಉಂಟಾಗುತ್ತಿರುತ್ತದೆ ಎಂದು ತಿಳಿಸಿದರು.

ಶ್ರೀ ಗುರು, ಕಾ.ಪಾ.ಅ ಹಾಗೂ ನೋಡಲ್ ಅಧಿಕಾರಿ ರವರು ಮಾತನಾಡುತ್ತ ಟ್ರಾಫಿಕ್ ಪೊಲೀಸ್ ರವರನ್ನು ಸಂಪರ್ಕಿಸಿ ಸಮಸ್ಯೆಯನ್ನು ಬಗೆಹರಿಸುವುದಾಗಿ ತಿಳಿಸಿದರು.

ಶ್ರೀ ಆರ್.ಆರ್. ಪಟ್ನನಾಯಕ್, ಎಲ್.ಕೆ.ಆರ್ ಬಡಾವಣೆ, ಸದಸ್ಯರು ರವರು ಸದರಿ ಬಡಾವಣೆಯ ಮುಖ್ಯರಸ್ತೆಯಲ್ಲಿ ವಾಹನಗಳನ್ನು ಖಾಲಿ ಜಾಗದಲ್ಲಿ ನಿಲ್ಲಿಸಿ, ಮಧ್ಯಸೇವನೆಯನ್ನು ಮಾಡಿ ಸಾರ್ವಜನಿಕರಿಗೆ ಕಿರುಕುಳ ಕೊಡುತ್ತಿದ್ದಾರೆಂದು ಸಭೆಗೆ ತಿಳಿಸಿದರು.

ಶ್ರೀನಿವಾಸ್ ಶಿರೂರು, ಪೊಲೀಸ್ ಸಬ್‌ಇನ್ಸ್‌ಪೆಕ್ಟರ್, ಕೊಡಿಗೇಹಳ್ಳಿ ಠಾಣೆ ರವರು ಯಾವುದಾದರೂ ಬಂದಲ್ಲಿ, ಸದರಿ ಜಾಗಕ್ಕೆ ಪೊಲೀಸ್ ಕಾನ್ಸ್‌ಟೇಬಲ್ ರವರನ್ನು ಕಳುಹಿಸಿ ಕೊಡುತ್ತೇನೆಂದು ಸೂಚಿಸಿದರು.

ಶ್ರೀಮತಿ ನಿರ್ಮಲರಾವ್, ಸಹಕಾರನಗರ, ಸದಸ್ಯರು ರವರು 4ನೇ ಬ್ಲಾಕ್, ಸಹಕಾರನಗರದಲ್ಲಿ ಕಸವನ್ನು ಗುಡಿಸುತ್ತಿರುವುದಿಲ್ಲ ಮತ್ತು ಕಟ್ಟಡ ನಿರ್ಮಾಣ ಮಾಡುತ್ತಿರುವ ಜಾಗದಲ್ಲಿ ಡೆಬ್ರಿಸ್‌ಗಳು ಚರಂಡಿಯೊಳಗೆ ಬೀಳುತ್ತಿರುತ್ತದೆ. ಆದ್ದರಿಂದ ಚರಂಡಿಯಲ್ಲಿ ನೀರು ಸಾರಾಗವಾಗಿ ಹರಿಯಲು ತುಂಬಾ ತೊಂದರೆಯುಂಟಾಗುತ್ತಿರುತ್ತದೆ ಎಂದು ಸಭೆಗೆ ತಿಳಿಸಿದರು.

ಶ್ರೀಮತಿ. ಕವಿತ ಕಿ.ಆ.ನಿ ರವರು ಮಾತನಾಡುತ್ತ, ಸದರಿ ಸ್ಥಳಕ್ಕೆ ಕಸವನ್ನು ಗುಡಿಸಲು ಪೌರಕಾರ್ಮಿಕರನ್ನು ನೇಮಿಸುತ್ತೇನೆಂದು ಸೂಚಿಸಿದರು ಹಾಗೂ ವಾರಕ್ಕೊಮ್ಮೆ ಕ್ಲೀನಿಂಗ್ ಮಾಡುವುದಾಗಿ ಸೂಕ್ತ ಕ್ರಮಕೈಗೊಂಡು ಸಮಸ್ಯೆಯನ್ನು ಬಗೆಹರಿಸಿ ಕೊಡುವುದಾಗಿ ಸಭೆಗೆ ತಿಳಿಸಿದರು.

ಶ್ರೀ ಗುರು, ಕಾ.ಪಾ.ಅ ಹಾಗೂ ನೋಡಲ್ ಅಧಿಕಾರಿ ರವರು ಮಾತನಾಡುತ್ತ ಬಿಬಿಎಂಪಿ ಮೈ ಸಿಟಿ ಮೈ ಬಜೆಟ್ 2021-22 ವೆಂಬ ಕಾರ್ಯಕ್ರಮ ಹಮ್ಮಿಕೊಂಡಿದ್ದು ನಾಗರಿಕರು ಇದರಲ್ಲಿ ಭಾಗವಹಿಸಬೇಕೆಂದು ಕೇಳಿದರು. ಈ ಕಾರ್ಯಕ್ರಮದಲ್ಲಿ ಶೌಚಾಲಯ ಹಾಗೂ ಫುಟ್‌ಪಾತ್‌ಗಳಿಗೆ ಆದ್ಯತೆ ಮೇರೆಗೆ ನಿರ್ಮಾಣ ಮಾಡಲು ಕ್ರಮ ಕೈಗೊಳ್ಳಲಾಗುವುದಾಗಿ ತಿಳಿಸುತ್ತಾ, ನಾಗರಿಕರು ಹಾಗೂ ವಸತಿ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು ತಮ್ಮ ಬಡಾವಣೆಗೆ ಬೇಕಾಗಿರುವ ಶೌಚಾಲಯ ಹಾಗೂ ಫುಟ್‌ಪಾತ್‌ಗಳ ನಿರ್ಮಾಣಕ್ಕಾಗಿ ಜಾಗಗಳನ್ನು ಗುರುತಿಸಿ ಕೊಡಬೇಕೆಂದು ತಿಳಿಸಿದರು. ಅದಕ್ಕೆ ಸದಸ್ಯರವರುಗಳು ಭದ್ರಪ್ಪ ಬಡಾವಣೆ ಮುಖ್ಯರಸ್ತೆ, ಎಲ್.ಕೆ.ಆರ್.ನಗರ ಮತ್ತು ಬಾಲಾಜಿ ಬಡಾವಣೆಯ ಮುಖ್ಯರಸ್ತೆಯಲ್ಲಿ ಪುಟ್‌ಪಾತ್ ಹಾಗೂ ಭದ್ರಪ್ಪ ಬಡಾವಣೆಯಲ್ಲಿ ಶೌಚಾಲಯವನ್ನು ನಿರ್ಮಿಸಲು ಜಾಗವನ್ನು ಗುರುತಿಸಬೇಕಾಗಿದೆ ಎಂದು ಸಭೆಗೆ ತಿಳಿಸಿದರು.

ಶ್ರೀಮತಿ ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು ರವರು ಭದ್ರಪ್ಪ ಬಡಾವಣೆಯಲ್ಲಿ ಸ್ಕೈವಾಕ್ ಕಾರ್ಯವು ಸ್ಥಗಿತಗೊಂಡಿರುತ್ತದೆ. ಆದ್ದಿಂದ ಸಾರ್ವಜನಿಕರಿಗೆ ರಸ್ತೆಯನ್ನು ದಾಟಲು ತುಂಬಾ ತೊಂದರೆ ಉಂಟಾಗುತ್ತಿರುತ್ತದೆ ಎಂದು ಸಭೆಗೆ ತಿಳಿಸಿದರು.

ಶ್ರೀ ಪ್ರವೀಣ್ ಎ.ಆರ್., ಕಿರಿಯ ಅಭಿಯಂತರರು ರವರು ಭದ್ರಪ್ಪ ಬಡಾವಣೆಯಲ್ಲಿ ಸ್ಕೈವಾಕ್ ಕಾರ್ಯವು ಸ್ಥಗಿತಗೊಂಡಿರುವ ಬಗ್ಗೆ ಮಾತಾನಾಡುತ್ತ ಸ್ಕೈವಾಕ್ ಪಕ್ಕದ ಮನೆಯವರು ನ್ಯಾಯಲಯದಲ್ಲಿ ದಾವೆಯನ್ನು ಹೂಡಿರುತ್ತಾರೆ. ಆದ ಕಾರಣ ನ್ಯಾಯಲಯವು ಸ್ಕೈವಾಕ್ ಕಾರ್ಯವನ್ನು ಸ್ಥಗಿತಗೊಳಿಸಿ ಯತಾಸ್ಥಿತಿ ಕಾಪಾಡಲು ಸೂಚಿಸಿರುತ್ತದೆ ಎಂದು ಸಭೆಗೆ ತಿಳಿಸಿದರು.

ಶ್ರೀ ಗುರು, ಕಾ.ಪಾ.ಅ ರವರು ಈ ಮೇಲ್ಕಂಡ ಅಂಶಗಳ ಬಗ್ಗೆ ವಿವರವಾಗಿ ಅಧಿಕಾರಿಗಳಿಗೆ ನಿರ್ದೇಶನ ನೀಡಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸೂಚಿಸಿದರು ನಂತರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯ ಗೊಳಿಸಲಾಯಿತು.

(ಪ್ರವೀಣ್ ಎ.ಆರ್.)
ಕಾರ್ಯದರ್ಶಿಗಳು ಮತ್ತು
ಕಿರಿಯ ಅಭಿಯಂತರರು
ವಾರ್ಡ್ 8, ಕೊಡಿಗೇಹಳ್ಳಿ ಉಪ ವಿಭಾಗ

(ಶ್ರೀ ಗುರು)
ಕಾರ್ಯಪಾಲಕ ಅಭಿಯಂತರರು ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ್ ಸಂಖ್ಯೆ:08

<u>ಪ್ರತಿಯನ್ನು:-</u>

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಆರೋಗ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೊಡಿಗೇಹಳ್ಳಿ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ರವರ ಮಾಹಿತಿಗಾಗಿ ಸಲ್ಲಿಸಿದೆ.
8. ವಾರ್ಡ್ ಕಮಿಟ ಸದಸ್ಯರುಗಳ ಮಾಹಿತಿಗಾಗಿ ಸಲ್ಲಿಸಿದೆ.
9. ಕಛೇರಿ ಕಡತಕ್ಕೆ.